ಶ್ರೀ ಟಿ.ಬಿ. ಜಯಚಂದ್ರ: ನಾನು ಕೂಡ ಅಂಥ ಪ್ರಶ್ನೆಗಳನ್ನು ಕೇಳುತ್ತಿದ್ದೆ. ಬಹಳಷ್ಟು ಪ್ರಶ್ನೆಗಳಿಗೆ ಉತ್ತರ ಸರ್ಕಾರದಿಂದ ಬರುವುದಿಲ್ಲ. ಅದನ್ನು ತರಿಸಿಕೊಡುವ ಜವಾಬ್ದಾರಿಯನ್ನು ಸರ್ಕಾರ ಹೊರಬೇಕು. ಎಲ್ಲಿ controversy ಇರುತ್ತದೆ ಅಂಥ ಕಡೆ ಅವರು ಉತ್ತರ ಕೊಡುವುದಿಲ್ಲ. ಅಂಥ ಕಡೆ ಉತ್ತರ ತರಿಸಿ ಕೊಡುವಂಥ ಜವಾಬ್ದಾರಿ ಯಾರದು? ಬಂದಾಗ ಕೊಡುತ್ತೇನೆಂದರೆ ಉತ್ತರ ಬರುವುದೇ ಇಲ್ಲ.

ಶ್ರೀ ಎಸ್. ಸುರೇಶ್ ಕುಮಾರ್: ಕೆಲವು ಪ್ರಶ್ನೆಗಳಿಗೆ ಉತ್ತರ ಬರುವುದಿಲ್ಲ, ಒಪ್ಪಿಕೊಳ್ಳುತ್ತೇನೆ. ಆದರೆ, controversy ಇರುವ ಪ್ರಶ್ನೆಗಳಿಗೆ ಉತ್ತರ ಬರುವುದಿಲ್ಲವೆನ್ನುವುದನ್ನು ನಾನು ಒಪ್ಪುವುದಿಲ್ಲ. ನಿನ್ನೆ ವಿಧಾನ ಪರಿಷತ್ತಿನಲ್ಲಿ ಕೆಲವು ಪ್ರಶ್ನೆಗಳಿಗೆ ಉತ್ತರ ಕೊಟ್ಟಿದ್ದೇವೆ. ನಾವು ಯಾವುದೇ ಮುಚ್ಚುಮರೆಯಿಲ್ಲದೆ ಉತ್ತರ ಕೊಡುತ್ತಿದ್ದೇವೆ. ಕೆಲವು ಪ್ರಶ್ನೆಗಳಿಗೆ ಉತ್ತರ ಏನು ಬಂದಿಲ್ಲ ತರಿಸಿ ಕೊಡುತ್ತೇನೆ.

4. ವರದಿಯನ್ನೊಪ್ಪಿಸುವುದು

ಶ್ರೀ ಎಲ್.ಎ. ರವಿ ಸುಬ್ರಮಣ್ಯ (ಬಸವನಗುಡಿ) (ಶ್ರೀ ಎಂ.ಕೆ. ಪಟ್ಟಣಶೆಟ್ಟಿಯವರು ಸಾರ್ವಜನಿಕ ಉದ್ಯಮಗಳ ಸಮಿತಿಯ ಅಧ್ಯಕ್ಷರು ಅವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ಸಾರ್ವಜನಿಕ ಉದ್ಯಮಗಳ ಸಮಿತಿಯ ಸದಸ್ಯನಾಗಿ 2010–11ನೇ ಸಾಲಿನ ಸಮಿತಿಯ ಸಭೆಗಳಲ್ಲಿ ಚರ್ಚೆಯಾಗಿ ಅನುಮೋದಿಸಿದ ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಮೈಸೂರು ಕಾಗದ ಕಾರ್ಖಾನೆ ನಿಗಮ ನಿಯಮಿತಕ್ಕೆ ಸಂಬಂಧಿಸಿದ ಕ್ರಮವಾಗಿ 124 ಮತ್ತು 125ನೇ ವರದಿಗಳನ್ನು ಸಭೆಗೆ ಒಪ್ಪಿಸುತ್ತೇನೆ.

ಉಪಾಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

5. ಶಾಸನ ರಚನೆ

(ಅ) ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕ, 2011

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜೆ. ಕೃಷ್ಣ ಪಾಲೆಮಾರ್ (ಬಂದರು ಮತ್ತು ಒಳನಾಡು ಜಲಸಾರಿಗೆ, ಜೀವಿಶಾಸ್ತ್ರ ಮತ್ತು ಪರಿಸರ, ಮೀನುಗಾರಿಕೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು

ಈಗ ಪ್ರಸ್ತಾವನೆ ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ.

2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು " ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು

ಶ್ರೀ ಜೆ. ಕೃಷ್ಣ ಪಾಲೆಮಾರ್ (ಬಂದರು ಮತ್ತು ಒಳನಾಡು ಜಲಸಾರಿಗೆ, ಜೀವಿಶಾಸ್ತ್ರ ಮತ್ತು ಪರಿಸರ, ಮೀನುಗಾರಿಕೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2011 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಸ್. ಸುರೇಶ್ ಕುಮಾರ್: (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಪರವಾಗಿ): ಮಾನ್ಯ ಉಪಾಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.